ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ಉಪನಿರ್ದೇಶಕರ ಕಚೇರಿ, ವಿಕಾಸಭವನ ಆವರಣ, ಲೋಕಸಭಾ ಸದಸ್ಯರ ಕಚೇರಿ ಹತ್ತಿರ, ಕಲಬುರಗಿ-585102
ದೂರವಾಣಿ: 08472-223133 ಫ್ಯಾಕ್ಸ್: 08472-223133 ಇ-ಮೇಲ್: varthabhavangulbarga2008@gmail.com
website: http://groups.google.com/group/varthabhavangulbarga2008 Facebook: Gulbargavarthe Blogger: Gulbargavarthe

27ನೇ ಮೇ 2017

# ಪ್ರಾದೇಶಿಕ ಅಸಮಾನತೆ ಹೋಗಲಾಡಿಸಲು ಸರ್ಕಾರ ಬದ್ಧ




ಕಲಬುರಗಿ,ಮೇ.27.- ಪ್ರಾದೇಶಿಕ ಅಸಮಾನತೆ ಹೋಗಲಾಡಿಸಲು ಸರ್ಕಾರ ಬದ್ಧವಾಗಿದ್ದು, ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಡಾ. ನಂಜುಂಡಪ್ಪ ವರದಿಯನ್ವಯ ಗುರುತಿಸಿದ ಹೈದ್ರಾಬಾದ್ ಕರ್ನಾಟಕ ಪ್ರದೇಶದಲ್ಲಿರುವ ಅತ್ಯಂತ ಹಿಂದುಳಿದ ತಾಲೂಕುಗಳು ಸೇರಿದಂತೆ ಒಟ್ಟು 114 ತಾಲೂಕುಗಳ ಹಾಗೂ ಹೈದ್ರಾಬಾದ್ ಕರ್ನಾಟಕ ಪ್ರದೇಶದ ಆರು ಜಿಲ್ಲೆಗಳ ವಿಶೇಷ ಅಭಿವೃದ್ಧಿಗಾಗಿ ಹೆಚ್ಚಿನ ಅನುದಾನ ಒದಗಿಸುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಅವರು ಶನಿವಾರ ಕಲಬುರಗಿಯಲ್ಲಿ ಗುಲಬರ್ಗಾ ವೈದ್ಯಕೀಯ ವಿಜ್ಞಾನಗಳ ಬೋಧನಾ ಆಸ್ಪತ್ರೆ ಕಟ್ಟಡದ ಹಿಂಭಾಗದಲ್ಲಿ ಬೆಂಗಳೂರಿನ ಕಿದ್ವಾಯಿ ಕ್ಯಾನ್ಸರ್ ಸಂಸ್ಥೆಯಿಂದ 80 ಹಾಸಿಗೆಗಳ ಸಾಮರ್ಥ್ಯದ ನವೀಕರಿಸಿದ ವಿ.ಟಿ.ಎಸ್.ಎಂ. ಫೆರಿಫರೆಲ್ ಕ್ಯಾನ್ಸರ್ ಕೇಂದ್ರದ ಹಾಗೂ ಲಿನಿಯರ್ ಎಕ್ಸಲರೇಟರ್ ಯಂತ್ರದ ಲೋಕಾರ್ಪಣೆ ಮತ್ತು ಇನ್ಫೋಸಿಸ್ ಫೌಂಡೇಶನ್‌ದಿಂದ ದೇಣಿಗೆಯಾಗಿ ನೀಡುತ್ತಿರುವ ಧರ್ಮಶಾಲೆಯ ಶಿಲ್ಯಾನಾಸ ನೆರವೇರಿಸಿ, ರಾಜ್ಯದ ಎಲ್ಲ ಪ್ರದೇಶ, ಜಾತಿ ಜನಾಂಗಕ್ಕೂ ಸಾಮಾಜಿಕ ನ್ಯಾಯ ಹಾಗೂ ಸಮಾನತೆ ಕಲ್ಪಿಸಬೇಕೆಂಬುದೇ ಸರ್ಕಾರದ ಪ್ರಮುಖ ಧ್ಯೇಯವಾಗಿದೆ ಎಂದರು.

ಹೈದ್ರಾಬಾದ್ ಕರ್ನಾಟಕ ಪ್ರದೇಶ ವ್ಯಾಪ್ತಿಯ ಆರು ಜಿಲ್ಲೆಗಳಲ್ಲಿರುವ ಶೈಕ್ಷಣಿಕ ಮತ್ತು ಆರೋಗ್ಯ ಕ್ಷೇತ್ರದ ಅಸಮಾನತೆ ಹಾಗೂ ತಾರತಮ್ಯ ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರ ವಿಶೇಷ ಗಮನ ನೀಡಲಿದೆ. ರಾಜ್ಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಹಾಗೂ ಪದವಿಪೂರ್ವ ಕಾಲೇಜುಗಳನ್ನು ಮಂಜೂರು ಮಾಡುವಾಗ ಈ ಭಾಗಕ್ಕೆ ಪ್ರಥಮಾದ್ಯತೆ ನೀಡಿ ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರದ ಬಲವರ್ಧನೆಗೆ ಪ್ರಯತ್ನಿಸಲಾಗುವುದು. ಹೈದ್ರಾಬಾದ್ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಪ್ರಸಕ್ತ ಸಾಲಿನ 1500 ಕೋಟಿ ರೂ. ಸೇರಿದಂತೆ ಈವರೆಗೆ ಒಟ್ಟು 4500 ಕೋಟಿ ರೂ. ಅನುದಾನ ಒದಗಿಸಿದ್ದು, ಈ ಭಾಗದಲ್ಲಿನ ಅತ್ಯಂತ ಹಿಂದುಳಿದ ತಾಲೂಕುಗಳ ಅಭಿವೃದ್ಧಿಗೂ ವಿಶೇಷ ಅನುದಾನ ನೀಡಲಾಗುತ್ತಿದೆ ಎಂದು ನುಡಿದರು.

ಕ್ಯಾನ್ಸರ್ ಎಂದರೆ ಭಯಪಡುವ ರೋಗವಲ್ಲ. ಈಗ ಈ ರೋಗದ ಬಗ್ಗೆ ಅನೇಕ ಸಂಶೋಧನೆಗಳು ನಡೆದಿದ್ದಲ್ಲದೇ ಅತ್ಯಾಧುನಿಕ ಚಿಕಿತ್ಸಾ ಸೌಲಭ್ಯಗಳು ಲಭ್ಯವಿರುವುದರಿಂದ ಇದನ್ನು ಮುಂಚಿತವಾಗಿಯೇ ಗುರುತಿಸಿ ಚಿಕಿತ್ಸೆ ನೀಡಿದರೆ ಸಂಪೂರ್ಣವಾಗಿ ಗುಣಪಡಿಸಬಹುದು. ಸದ್ಯಕ್ಕೆ ಶೇ. 8ರಷ್ಟು ಕ್ಯಾನ್ಸರ್ ಬೆಳವಣಿಗೆ ಕಂಡು ಬಂದಿದೆ. ವಿಶೇಷವಾಗಿ ತಂಬಾಕು ಸೇವನೆಯ ಪ್ರತಿ 5 ಜನರಲ್ಲಿ ಒಬ್ಬರು ಈ ರೋಗಕ್ಕೆ ತುತ್ತಾಗುತ್ತಿದ್ದಾರೆ. ಇದಕ್ಕೆಲ್ಲ ಆಹಾರ ಮತ್ತು ಜೀವನ ಪದ್ಧತಿಗಳು ಮೂಲ ಕಾರಣವಾಗಿದ್ದು, ಜನರಲ್ಲಿ ಹೆಚ್ಚಿನ ಜಾಗೃತಿ ಬರಬೇಕಾಗಿದೆ. "ಶೀಘ್ರ ಪತ್ತೆ, ಕ್ಯಾನ್ಸರ್ ನಾಪತ್ತೆ" ಎಂಬ ಘೋಷ ವಾಕ್ಯದ ಪ್ರಚಾರವನ್ನು ಈ ಭಾಗದ ಎಲ್ಲ ಜಿಲ್ಲೆಗಳಲ್ಲಿ ವಿಶೇಷ ಅಭಿಯಾನದ ಮೂಲಕ ಕೈಗೊಳ್ಳಬೇಕು. ಬೆಂಗಳೂರಿನ ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಯಲ್ಲಿರುವ ಎಲ್ಲ ಅತ್ಯಾಧುನಿಕ ಚಿಕಿತ್ಸೆ ಸೌಲಭ್ಯಗಳು ಕಲಬುರಗಿಯಲ್ಲಿ ಇಂದು ಲೋಕಾರ್ಪಣೆ ಮಾಡಿದ ಕ್ಯಾನ್ಸರ್ ಆಸ್ಪತ್ರೆಯಲ್ಲಿಯೂ ಲಭ್ಯವಿದ್ದು, ಈ ಭಾಗದ ಜನರು ಇದರ ಪ್ರಯೋಜನ ಪಡೆಯಬೇಕು. ಕಲಬುರಗಿಯ ಕ್ಯಾನ್ಸರ್ ಆಸ್ಪತ್ರೆಯಲ್ಲಿ ಇನ್ಫೋಸಿಸ್ ಸಂಸ್ಥೆಯಿಂದ ಪ್ರಾರಂಭಿಸಲಾದ ಧರ್ಮಶಾಲೆಗೆ ಹೆಚ್ಚಿನ ಅನುದಾನ ಒದಗಿಸಬೇಕೆಂದರು.

ಲೋಕಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ದಕ್ಷಿಣ ಕರ್ನಾಟಕ ಮತ್ತು ಉತ್ತರ ಕರ್ನಾಟಕದ ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರಗಳಲ್ಲಿರುವ ತಾರತಮ್ಯವನ್ನು ಸರಿಪಡಿಸಲು ಸರ್ಕಾರ ವಿಶೇಷ ಗಮನ ಹರಿಸಬೇಕು. ಮೈಸೂರು ಭಾಗದಲ್ಲಿ ಪ್ರತಿ 15000 ಜನಸಂಖ್ಯೆಗೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರವಿದ್ದರೆ ಜನಸಂಖ್ಯೆಗೆ ಹೈದ್ರಾಬಾದ್ ಕರ್ನಾಟಕ ಪ್ರದೇಶದಲ್ಲಿ ಪ್ರತಿ 20000 ಜನಸಂಖ್ಯೆಗೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರವಿದೆ. ಅದೇ ರೀತಿ ಈ ಭಾಗದಲ್ಲಿ ಪದವಿಪೂರ್ವ ಕಾಲೇಜುಗಳ ಸಂಖ್ಯೆಯೂ ಕಡಿಮೆಯಿದೆ. ಇದನ್ನು ಸರಿಪಡಿಸಲು ಮುಖ್ಯಮಂತ್ರಿಗಳು ವಿಶೇಷ ಗಮನ ಹರಿಸಬೇಕೆಂದರು.

ವೈದ್ಯಕೀಯ ಶಿಕ್ಷಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ॥ ಶರಣಪ್ರಕಾಶ ಪಾಟೀಲ ಮಾತನಾಡಿ, ಕಲಬುರಗಿ ನಗರದಲ್ಲಿ 80 ಹಾಸಿಗೆಗಳ ಪೂರ್ಣ ಪ್ರಮಾಣದ ಕಿದ್ವಾಯಿ ಕ್ಯಾನ್ಸರ್ ಸಂಸ್ಥೆಯ ನವೀಕೃತ ಹಾಗೂ ಮೇಲ್ದರ್ಜೆಗೇರಿಸಿದ ವಿ.ಟಿ.ಎಸ್.ಎಂ. ಫೆರಿಫರಲ್ ಕ್ಯಾನ್ಸರ್ ಕೇಂದ್ರವನ್ನು 50 ಕೋಟಿ ರೂ. ವೆಚ್ಚದಿಂದ ಎರಡು ಹಂತಗಳಲ್ಲಿ ಮೇಲ್ದರ್ಜೆಗೇರಿಸಲಾಗಿದೆ. ಈ ಕೇಂದ್ರದಲ್ಲಿ ಎಲ್ಲ ತರಹದ ಕ್ಯಾನ್ಸರ್ ರೋಗಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಬಿ.ಪಿ.ಎಲ್. ಕುಟುಂಬಗಳಿಗೆ ಉಚಿತ ಚಿಕಿತ್ಸೆ ಹಾಗೂ ಎಪಿಎಲ್ ಕುಟುಂಬಗಳಿಗೆ ಶೇ. 70 ರಷ್ಟು ಮತ್ತು ಕಡಿಮೆ ಆದಾಯ ಹೊಂದಿದ ಕುಟುಂಬಗಳಿಗೆ ಶೇ. 50ರಷ್ಟು ರಿಯಾಯಿತಿಯಲ್ಲಿ ಚಿಕಿತ್ಸೆ ನೀಡಲಾಗುವುದು. ಇದರಿಂದ ಈ ಭಾಗದ ಆರು ಜಿಲ್ಲೆಗಳ ಹಾಗೂ ನೆರೆಯ ರಾಜ್ಯಗಳ ಬಡ ಕ್ಯಾನ್ಸರ್ ಹೊರ ರೋಗಿಗಳು ಅತ್ಯಾಧುನಿಕ ಚಿಕಿತ್ಸೆ ಪಡೆಯಲು ಅನುಕೂಲವಾಗಿದೆ. ಕಲಬುರಗಿ ನಗರದಲ್ಲಿ ಕಳೆದ ವರ್ಷ ಪ್ರಾರಂಭಿಸಲಾದ ಜಯದೇವ ಹೃದ್ರೋಗ ಆಸ್ಪತ್ರೆಯ ಶಾಖೆಯಲ್ಲಿ ಈವರೆಗೆ 30000 ಹೃದ್ರೋಗಿಗಳಿಗೆ ಓಪಿಡಿ ಮತ್ತು 3200 ರೋಗಿಗಳಿಗೆ ಒಳರೋಗಿ ಚಿಕಿತ್ಸೆ ನೀಡಲಾಗಿದೆ. ಇದಲ್ಲದೇ 15000 ಜನರ ಇ.ಸಿ.ಜಿ. ತಪಾಸಣೆ ಮಾಡಲಾಗಿದೆಯಲ್ಲದೇ 50 ಜನರ ಓಪನ್ ಹಾರ್ಟ್ ಸರ್ಜರಿ ಮಾಡಲಾಗಿದೆ. ಇದೇ ಮಾದರಿಯಲ್ಲಿ ಕ್ಯಾನ್ಸರ್ ಆಸ್ಪತ್ರೆಯು ಸಹ ಜನಸ್ನೇಹಿಯಾಗಿ ಬೆಳವಣಿಗೆಯಾಗಲಿ. ರಾಜ್ಯ ಸರ್ಕಾರವು ಮೈಸೂರು ಮತ್ತು ಕಲಬುರಗಿಗಳಲ್ಲಿ ಟ್ರಾಮಾ ಸೆಂಟರ್ ಮಂಜೂರು ಮಾಡಿದ್ದು, ಬರುವ 6 ತಿಂಗಳೊಳಗೆ ಕಲಬುರಗಿಯಲ್ಲಿ ಟ್ರಾಮಾ ಸೆಂಟರ್ ಕಾರ್ಯ ಪ್ರಾರಂಭವಾಗಲಿದೆ. ಮೈಸೂರು, ಕಲಬುರಗಿ ಮತ್ತು ಬೆಳಗಾವಿಗಳಲ್ಲಿ ರಾಜ್ಯ ಸರ್ಕಾರ ಸೂಪರ್ ಸ್ಪೆಶಾಲಿಟಿ ಹಾಸ್ಪಿಟಲ್ ಪ್ರಾರಂಭಿಸಲಿದೆ ಎಂದು ಹೇಳಿದರು.

ಕಲಬುರಗಿ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ದತ್ತಾತ್ರೇಯ ಸಿ. ಪಾಟೀಲ ರೇವೂರ್ ಅಧ್ಯಕ್ಷತೆ ವಹಿಸಿದ್ದರು. ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷ ಮಾಲೀಕಯ್ಯ ವ್ಹಿ.ಗುತ್ತೇದಾರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಂಸದೀಯ ಕಾರ್ಯದರ್ಶಿ ಡಾ॥ ಉಮೇಶ ಜಾಧವ, ಜಿಲ್ಲಾ ಪಂಚಾಯಿತಿ ಅಧ್ಯಕ್ಷೆ ಸುವರ್ಣಾ ಹಣಮಂತರಾಯ ಮಲಾಜಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ವಿಧಾನಸಭಾ ಶಾಸಕರುಗಳಾದ ಡಾ. ಖಮರುಲ್ ಇಸ್ಲಾಂ, ಜಿ.ರಾಮಕೃಷ್ಣ, ಬಿ.ಆರ್. ಪಾಟೀಲ, ಡಾ॥ ಅಜಯಸಿಂಗ್, ವಿಧಾನ ಪರಿಷತ್ ಶಾಸಕರುಗಳಾದ ಇಕ್ಬಾಲ್ ಅಹ್ಮದ್ ಸರಡಗಿ, ಬಿ.ಜಿ. ಪಾಟೀಲ, ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅಧ್ಯಕ್ಷ ಇಲಿಯಾಸ್ ಬಾಗವಾನ್, ಕರ್ನಾಟಕ ತೊಗರಿ ಮಂಡಳಿ ಅಧ್ಯಕ್ಷ ಭಾಗಣ್ಣಗೌಡ ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಹ್ಮದ್ ಅಸಗರ್ ಚುಲಬುಲ್, ಕಾಡಾ ಅಧ್ಯಕ್ಷ ಮಹಾಂತಪ್ಪ ಸಂಗಾವಿ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಾಬುರಾವ ಚಿಂಚನಸೂರ, ಕಲಬುರಗಿ ಮಹಾನಗರ ಪಾಲಿಕೆ ಮಹಾಪೌರ ಶರಣಕುಮಾರ ಮೋದಿ, ಮಹಾನಗರ ಪಾಲಿಕೆ ಸದಸ್ಯ ವಿಶಾಲ ದರ್ಗಿ, ರಮಾನಂದ ಉಪಾಧ್ಯ ಹಾಗೂ ಇನ್ಫೋಸಿಸ್ ಫೌಂಡೇಶನ್ ಟ್ರಸ್ಟಿ ಬಿನೋದ್ ಹಂಪಾಪುರ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಜಿಲ್ಲಾಧಿಕಾರಿ ಉಜ್ವಲ್‌ಕುಮಾರ ಘೋಷ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹೆಪ್ಸಿಬಾರಾಣಿ ಕೊರ್ಲಪಾಟಿ, ಕಲಬುರಗಿ ಈಶಾನ್ಯ ವಲಯದ ಪೊಲೀಸ್ ಮಹಾನಿರೀಕ್ಷಕ ಅಲೋಕ ಕುಮಾರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್. ಶಶಿಕುಮಾರ, ವಿಶೇಷ ಆಹ್ವಾನಿತರಾಗಿ ಪಾಲ್ಗೊಂಡಿದ್ದರು.

ರಾಜೀವಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಕುಲಪತಿ ಡಾ॥ ಕೆ.ಎಸ್. ರವೀಂದ್ರನಾಥ್ ಪ್ರಾಸ್ತಾವಿಕವಾಗಿ ಮಾತನಾಡಿ, ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು 1996ರಿಂದ ಕಾರ್ಯನಿರ್ವಹಿಸುತ್ತಿದ್ದು, ಕರ್ನಾಟಕ ರಾಜ್ಯದಲ್ಲಿರುವ ವೈದ್ಯಕೀಯ, ದಂತ ವೈದ್ಯಕೀಯ, ಆಯುರ್ವೇದ, ನ್ಯಾಚುರೋಪತಿ, ಯುನಾನಿ, ಹೋಮಿಯೋಪತಿ, ಫಾರ್ಮಸಿ, ನರ್ಸಿಂಗ್, ಫಿಜಿಯೋಥೆರಪಿ ಸೇರಿದಂತೆ ಒಟ್ಟು 650 ಕಾಲೇಜುಗಳು ವಿಶ್ವವಿದ್ಯಾಲಯಗಳೊಂದಿಗೆ ಅಫಿಲಿಯೇಶನ್ ಪಡೆದಿವೆ. ಕಲಬುರಗಿ ಕಂದಾಯ ವಿಭಾಗದ ಆರು ಜಿಲ್ಲೆಗಳಲ್ಲಿರುವ 9 ವೈದ್ಯಕೀಯ, 8 ದಂತ ವೈದ್ಯಕೀಯ, 8 ಆಯುರ್ವೇದ, 11 ಫಾರ್ಮಸಿ, 30 ನರ್ಸಿಂಗ್, ತಲಾ 1 ಫಿಜಿಯೋಥೆರಫಿ ಮತ್ತು ಹೋಮಿಯೋಪತಿ ಕಾಲೇಜುಗಳು ಸೇರಿದಂತೆ ಒಟ್ಟು 70 ಕಾಲೇಜುಗಳು ವಿಶ್ವವಿದ್ಯಾಲಯದ ಅಫಿಲಿಯೇಶನ್‌ಗೆ ಒಳಪಟ್ಟಿವೆ. ರಾಜ್ಯ ಸರ್ಕಾರದ ಆದೇಶದನ್ವಯ ಕಲಬುರಗಿ ಮತ್ತು ಬೆಳಗಾವಿಗಳಲ್ಲಿ ವಿಶ್ವವಿದ್ಯಾಲಯದ ಪ್ರಾದೇಶಿಕ ಕೇಂದ್ರಗಳನ್ನು 2002ರಲ್ಲಿಯೇ ಪ್ರಾರಂಭಿಸಲಾಗಿದೆ. ಈಗ ವಿಶ್ವವಿದ್ಯಾಲಯದ ಪ್ರಪ್ರಥಮ ಪ್ರಾದೇಶಿಕ ಕೇಂದ್ರದ ಕಟ್ಟಡ ಕಾಮಗಾರಿಗೆ ಕಲಬುರಗಿಯಲ್ಲಿ ಶಿಲಾನ್ಯಾಸ ಇಂದು ನೆರವೇರಿಸಲಾಗಿದೆ ಎಂದರು. ಬೆಂಗಳೂರಿನ ಕಿದ್ವಾಯಿ ಕ್ಯಾನ್ಸರ್ ಸಂಸ್ಥೆಯ ನಿರ್ದೇಶಕ ಡಾ॥ ಕೆ.ಬಿ. ಲಿಂಗೇಗೌಡ ಸ್ವಾಗತಿಸಿದರು.

## ಪರಿಶಿಷ್ಟರ ಶ್ರೇಯೋಭಿವೃದ್ಧಿಗಾಗಿ ಈ ವರ್ಷ 27702 ಕೋಟಿ ರೂ. ಮೀಸಲು

ಕಲಬುರಗಿ,ಮೇ.27.(ಕ.ವಾ.)–ರಾಜ್ಯ ಸರ್ಕಾರ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಜನಸಂಖ್ಯೆಗೆ ಅನುಗುಣವಾಗಿ ಶೇ. 24.1ರಷ್ಟು ಅನುದಾನ ಮೀಸಲಿಡುವ ವಿಶೇಷ ಕಾಯ್ದೆಯನ್ನು ಜಾರಿಗೆ ತಂದಿದ್ದು, ಇದರನ್ವಯ ರಾಜ್ಯ ಸರ್ಕಾರ ಕಳೆದ ವರ್ಷ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ 19500 ಕೋಟಿ ರೂ.

ಒದಗಿಸಿದ್ದು, 2017–18ನೇ ಸಾಲಿನ ಆಯವ್ಯಯದಲ್ಲಿ 27702 ಕೋಟಿ ರೂ. ಮೀಸಲಿಟ್ಟಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಅವರು ಶನಿವಾರ ಕಲಬುರಗಿ ಇಂದಿರಾ ಸ್ಮಾರಕ ಭವನದ ಆವರಣದಲ್ಲಿ ಡಾ. ಬಾಬು ಜಗಜೀವನರಾಂ ಅವರ ಪುತ್ಥಳಿ ಅನಾವರಣಗೊಳಿಸಿ ಮಾತನಾಡಿ, ರಾಜ್ಯದಲ್ಲಿ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷಾ ಕಾರ್ಯ ಕೈಗೊಳ್ಳಲಾಗಿದ್ದು, ಈ ಸಮೀಕ್ಷಾ ವರದಿಯು ಬಂದ ಬಳಿಕ ಸಂಪುಟ ಸಭೆಯಲ್ಲಿ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು. ರಾಜ್ಯ ಸರ್ಕಾರ ಎಲ್ಲ ಜಾತಿ, ವರ್ಗದವರ ಹಾಗೂ ಸಾಮಾಜಿಕ ನ್ಯಾಯದ ಪರವಾಗಿದೆ ಎಂದರು.

ಡಾ. ಬಾಬು ಜಗಜೀವನರಾಂ ದೇಶ ಕಂಡಂತಹ ಮಹಾನ್ ನಾಯಕರಲ್ಲೊಬ್ಬರು. ಅವರು ಸಮರ್ಥ ಆಡಳಿತಗಾರರಾಗಿ ಬಡ ಮತ್ತು ಶೋಷಿತರಿಗಾಗಿ ಅನೇಕ ಕಾರ್ಯಕ್ರಮಗಳನ್ನು ಜಾರಿಗೊಳಿಸಿದರು. ಅವರು ಜಾರಿಗೊಳಿಸಿದ ಹಸಿರು ಕ್ರಾಂತಿಯ ಬಳಿಕವೇ ಭಾರತವು ಆಹಾರ ಸ್ವಾವಲಂಬನೆ ಪಡೆಯಲು ಸಾಧ್ಯವಾಯಿತು ಎಂದರು.

ಮಾಜಿ ಲೋಕಸಭಾ ಸದಸ್ಯೆ ಮೀರಾ ಕುಮಾರ ವಿಶೇಷ ಆಹ್ವಾನಿತರಾಗಿ ಮಾತನಾಡಿ, ಡಾ. ಬಾಬು ಜಗಜೀವನರಾಂ ಅವರ ತತ್ವಾದರ್ಶಗಳು ಹಾಗೂ ವಿಚಾರ ಧಾರೆಗಳು ಇಂದಿಗೂ ಪ್ರಸ್ತುತವಾಗಿವೆ. ಬಡತನ ನಿರ್ಮೂಲನೆಯ ಹೋರಾಟ ನಿರಂತರವಾಗಿ ಮುಂದುವರೆಯಬೇಕು. ಭಾರತ ದೇಶವು ಮಹಾನ್ ದೇಶವಾಗಬೇಕಾದರೆ ಸಾಮಾಜಿಕ ಮತ್ತು ಆರ್ಥಿಕ ಶೋಷಣೆ ಹಾಗೂ ಜಾತಿ ವ್ಯವಸ್ಥೆ ನಿರ್ಮೂಲನೆಯಾಗಬೇಕೆಂದು ನುಡಿದರು.

ಕಲಬುರಗಿ ಲೋಕಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಡಾ. ಬಾಬು ಜಗಜೀವನರಾಂ ದೇಶದ ಅಭಿವೃದ್ಧಿಗೆ ಅಪಾರ ಕೊಡುಗೆ ಕೊಟ್ಟಿದ್ದು, ದೇಶದಲ್ಲಿ ಒಡೆದಾಳುವ ನೀತಿಯನ್ನು ಸಹಿಸಲಾಗದು. ದಲಿತರ ವಿರುದ್ಧ ನಡೆಯುತ್ತಿರುವ ಸಂಚನ್ನು ಹಾಗೂ ಅನ್ಯಾಯವನ್ನು ಒಗ್ಗಟ್ಟಿನಿಂದ ಹೋರಾಡುವ ಶಕ್ತಿ ತಂದುಕೊಳ್ಳಬೇಕಲ್ಲದೇ ಸ್ವಾಭಿಮಾನದಿಂದ ಬದುಕುವ ಕೆಲಸ ಮಾಡಬೇಕಾಗಿದೆ ಎಂದರು.

ವೈದ್ಯಕೀಯ ಶಿಕ್ಷಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ॥ ಶರಣಪ್ರಕಾಶ ಪಾಟೀಲ, ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಹೆಚ್.ಆಂಜನೇಯ, ಅವರ ಘನ ಉಪಸ್ಥಿತಿಯಲ್ಲಿ ನಡೆಯುವ ಸಮಾರಂಭದ ಅಧ್ಯಕ್ಷತೆಯನ್ನು ಕಲಬುರಗಿ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ದತ್ತಾತ್ರೇಯ ಸಿ. ಪಾಟೀಲ ರೇವೂರ್ ವಹಿಸಿದ್ದರು.

ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷ ಮಾಲೀಕಯ್ಯ ವ್ಹಿ.ಗುತ್ತೇದಾರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಂಸದೀಯ ಕಾರ್ಯದರ್ಶಿ ಡಾ॥ ಉಮೇಶ ಜಾಧವ ಹಾಗೂ ಜಿಲ್ಲಾ ಪಂಚಾಯಿತಿ ಅಧ್ಯಕ್ಷೆ ಸುವರ್ಣಾ ಹಣಮಂತರಾಯ ಮಲಾಜಿ, ವಿಧಾನಸಭಾ ಶಾಸಕರುಗಳಾದ ಡಾ. ಖಮರುಲ್ ಇಸ್ಲಾಂ, ಜಿ.ರಾಮಕೃಷ್ಣ, ಬಿ.ಆರ್. ಪಾಟೀಲ, ಡಾ॥ ಅಜಯಸಿಂಗ್, ವಿಧಾನ ಪರಿಷತ್ ಶಾಸಕರುಗಳಾದ ಕೆ.ಬಿ. ಶಾಣಪ್ಪ, ಇಕ್ಬಾಲ್ ಅಹ್ಮದ್ ಸರಡಗಿ, ಬಿ.ಜಿ. ಪಾಟೀಲ, ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅಧ್ಯಕ್ಷ ಇಲಿಯಾಸ್ ಬಾಗವಾನ್, ಕರ್ನಾಟಕ ತೊಗರಿ ಮಂಡಳಿ ಅಧ್ಯಕ್ಷ ಭಾಗಣ್ಣಗೌಡ ಪಾಟೀಲ ಸಂಕನೂರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಹ್ಮದ್ ಅಸಗರ್ ಚುಲಬುಲ್, ಕಾಡಾ ಅಧ್ಯಕ್ಷ ಮಹಾಂತಪ್ಪ ಸಂಗಾವಿ, ಕಲಬುರಗಿ ಮಹಾನಗರ ಪಾಲಿಕೆ ಮಹಾಪೌರ ಶರಣಕುಮಾರ ಮೋದಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಮಹಾನಗರ ಪಾಲಿಕೆ ಉಪ ಮಹಾಪೌರ್ ಪುತಲಿ ಬೇಗಂ, ಮಹಾನಗರ ಪಾಲಿಕೆ ಸದಸ್ಯರುಗಳಾದ ಜಗದೇವಿ ಮಲ್ಲು ಸೋಮ, ನಾಗರಾಜ ಗುಂಡಗುರ್ತಿ,

ಗೀತಾ ರಾಜು ವಾಡೇಕರ್, ಡಾ॥ ಬಾಬು ಜಗಜೀವರಾಂ ಪ್ರತಿಮೆ ಅನಾವರಣ ಸಮಿತಿ ಗೌರವಾಧ್ಯಕ್ಷ ಭೀಮಣ್ಣ ಟಿ. ಬಿಲವ್, ಅಧ್ಯಕ್ಷ ಶ್ಯಾಮ ನಾಟೀಕರ ಹಾಗೂ ಕಾರ್ಯಾಧ್ಯಕ್ಷ ರಾಜು ವಾಡೇಕರ್, ಮಾಜಿ ಮಹಾಪೌರರು ಹಾಗೂ ಡಾ॥ ಬಾಬು ಜಗಜೀವರಾಂ ಪ್ರತಿಮೆ ಅನಾವರಣ ಸಮಿತಿ ಮಹಿಳಾ ಘಟಕದ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ ವಿಶೇಷ ಆಹ್ವಾನಿತರಾಗಿದ್ದರು. ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಎನ್. ರಾಜಪ್ಪ ಸ್ವಾಗತಿಸಿದರು. ಮಹಿಪಾಲರೆಡ್ಡಿ ಮುನ್ನೂರ ಕಾರ್ಯಕ್ರಮ ನಿರೂಪಿಸಿದರು.

***********